# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ವಸ್ತ್ರ ಸಂಹಿತೆ ಕುರಿತು.

ಓದಲಾಗಿದೆ: 1) ಕರ್ನಾಟಕ ಶಿಕ್ಷಣ ಕಾಯ್ದೆ 1983.

2) ಸರ್ಕಾರದ ಸುತ್ತೋಲೆ ಸಂಖ್ಯೆ: 509 ಎಸ್‌ಹೆಚ್‌ಹೆಚ್ 2013, ದಿನಾಂಕ: 31-01-2014.

***

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ:1ರಲ್ಲಿ ಕರ್ನಾಟಕ ಸರ್ಕಾರವು 1983ರಲ್ಲಿ ಜಾರಿಗೆ ತಂದಿರುವ ಶಿಕ್ಷಣ ಕಾಯ್ದೆ 1983ರಲ್ಲಿ (1-1995) ಕಲಂ 7 (2) (5)ರಲ್ಲಿ ವಿವರಿಸಿರುವಂತೆ ಕರ್ನಾಟಕ ರಾಜ್ಯದ ಎಲ್ಲಾ ಶಾಲೆಗಳ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಒಂದೇ ಕುಟುಂಬದ ರೀತಿಯಲ್ಲಿ ನಡೆದುಕೊಳ್ಳಬೇಕೆಂದು ಮತ್ತು ಯಾವುದೇ ಒಂದು ವರ್ಗಕ್ಕೆ ಸೀಮಿತವಾಗಿರದೇ ಸಾಮಾಜಿಕ ನ್ಯಾಯದ ಪರವಾಗಿ ನಡೆದುಕೊಳ್ಳಬೇಕು. ಪ್ರಸ್ತುತ ಕಾಯ್ದೆ ಕಲಂ-133ರ ಅಡಿಯಲ್ಲಿ ಶಾಲಾ ಮತ್ತು ಕಾಲೇಜುಗಳಿಗೆ ಈ ಬಗ್ಗೆ ಸೂಕ್ತ ನಿರ್ದೇಶನಗಳನ್ನು ನೀಡುವ ಅಧಿಕಾರವು ಸರ್ಕಾರಕ್ಕೆ ಪ್ರದತ್ತವಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(2)ರಲ್ಲಿನ ಸುತ್ತೋಲೆಯಲ್ಲಿ ಪದವಿ ಪೂರ್ವ ಶಿಕ್ಷಣವು ವಿದ್ಯಾರ್ಥಿಗಳ ಜೀವನದಲ್ಲಿ ಪ್ರಮುಖ ಘಟ್ಟವಾಗಿರುತ್ತದೆ. ಸರ್ಕಾರ ನೀಡುವ ಸೂಚನೆಗೆ ಅನುಗುಣವಾಗಿ ಮತ್ತು ಬಿಡುಗಡೆ ಮಾಡುವ ಅನುದಾನವನ್ನು ಸರಿಯಾಗಿ ಉಪಯೋಗಿಸಿಕೊಳ್ಳುವ ನಿಟ್ಟಿನಲ್ಲಿ ಹಾಗೂ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸುವ, ಶೈಕ್ಷಣಿಕ ಗುಣಮಟ್ಟವನ್ನು ಕಾಪಾಡುವ ದೃಷ್ಟಿಯಿಂದ ರಾಜ್ಯದ ಎಲ್ಲಾ ಶಾಲಾ ಮತ್ತು ಕಾಲೇಜುಗಳಲ್ಲಿ ಅಭಿವೃದ್ಧಿ ಸಮಿತಿಗಳನ್ನು ರಚಿಸಲಾಗಿದ್ದು, ಆಯಾ ಶಾಲಾ ಮತ್ತು ಕಾಲೇಜು ಅಭಿವೃದ್ಧಿ ಸಮಿತಿಯ ನಿರ್ಣಯಗಳ ಪ್ರಕಾರ ಕಾರ್ಯನಿರ್ವಹಿಸಲು ಸೂಚಿಸಲಾಗಿದೆ.

ಯಾವುದೇ ಶಿಕ್ಷಣ ಸಂಸ್ಥೆಯ ಮೇಲ್ವಿಚಾರಣಾ ಸಮಿತಿಯು (ಸರ್ಕಾರಿ ಶಾಲಾ ಕಾಲೇಜುಗಳಲ್ಲಿ- ಎಸ್.ಡಿ.ಎಂ.ಸಿ, ಖಾಸಗಿ ಶಾಲಾ ಕಾಲೇಜುಗಳಲ್ಲಿ-ಪೋಷಕರು ಮತ್ತು ಶಿಕ್ಷಕರ ಸಮಿತಿ ಹಾಗೂ ಆ ಸಂಸ್ಥೆಯ ಆಡಳಿತ ಮಂಡಳಿ) ಮೇಲಿನಂತೆ ಸುಗಮ ಶೈಕ್ಷಣಿಕ ವಾತಾವರಣವನ್ನು ವಿದ್ಯಾರ್ಥಿಗಳಿಗೆ ಕಲ್ಪಿಸುವ ಸದಾಶಯದಿಂದ ಸೂಕ್ತ ನೀತಿ ಸಂಹಿತೆಗಳನ್ನು ಆಯಾ ಶಾಲಾ ಕಾಲೇಜುಗಳಲ್ಲಿ ಸರ್ಕಾರದ ನೀತಿಗಳಿಗೆ ಅನುಸಾರವಾಗಿ ನಿರ್ಣಯಿಸಿ ಅಳವಡಿಸಿಕೊಳ್ಳಬಹುದಾಗಿದೆ. ಅಂತಹ ಸಮಿತಿಯ ನಿರ್ಣಯವು ಆಯಾ ಶಾಲಾ ಕಾಲೇಜುಗಳಿಗೆ ಸಂಬಂಧಿಸಿದಂತೆ ಇರುತ್ತದೆ.

ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಏಕರೂಪ ಕಲಿಕಾ ಕಾರ್ಯಕ್ರಮದಲ್ಲಿ ಭಾಗವಹಿಸಲು ಅನುಕೂಲವಾಗುವಂತೆ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಆದರೆ, ಕೆಲವು ವಿದ್ಯಾ ಸಂಸ್ಥೆಗಳಲ್ಲಿ ವಿದ್ಯಾರ್ಥಿ ವಿದ್ಯಾರ್ಥಿನಿಯರು ತಮ್ಮ ಧರ್ಮದ ಅನುಸಾರ ಆಚರಣೆಗಳನ್ನು ಪಾಲಿಸುತ್ತಿರುವುದು ಕಂಡುಬರುತ್ತಿದ್ದು ಇದರಿಂದ ಶಾಲಾ ಕಾಲೇಜುಗಳಲ್ಲಿ ಸಮಾನತೆ ಮತ್ತು ಏಕತೆಗೆ ಧಕ್ಕೆ ಬರುತ್ತಿರುವುದು ಶಿಕ್ಷಣ ಇಲಾಖೆಯ ಗಮನಕ್ಕೆ ಬಂದಿರುತ್ತದೆ.

ವೈಯಕ್ತಿಕ ವಸ್ತ್ರ ಸಂಹಿತೆಗಿಂತ ಏಕರೂಪ ವಸ್ತ ಸಂಹಿತೆಗೆ ಸಂಬಂಧಿಸಿದಂತೆ ರಾಷ್ಟ್ರದ ಮಾನ್ಯ ಸರ್ವೋಚ್ಚ ನ್ಯಾಯಾಲಯ ಮತ್ತು ವಿವಿಧ ರಾಜ್ಯಗಳ ಮಾನ್ಯ ಉಚ್ಚ ನ್ಯಾಯಾಲಯಗಳ ಮುಂದೆ ದಾಖಲಾದ ಪ್ರಕರಣಗಳಲ್ಲಿ ಈ ಕೆಳಕಂಡಂತೆ ತೀರ್ಪು ನೀಡಲಾಗಿರುತ್ತದೆ:

1) ಕೇರಳ ರಾಜ್ಯದ ಮಾನ್ಯ ಉಚ್ಚ ನ್ಯಾಯಾಲಯವು W.P(C) No. 35293/2018ರ ದಿನಾಂಕ:04-12-2018ರಂದು ನೀಡಲಾದ ಆದೇಶದ ಕಂಡಿಕೆ-9ರಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಹೇಳಿರುವ ತತ್ವವನ್ನು ಈ ಕೆಳಕಂಡಂತೆ ವಿವರಿಸಿರುತ್ತದೆ:

> "9. The Apex court in Asha Renjan & others v/s State of Bihar & others [(2017) 4 SCC 397] accepted the balance test when competing rights are involved and has taken a view that individual interest must yield to the larger public interest. Thus, conflict to competing rights can be resolved not by negating individual rights but by upholding larger right to remain, to hold such relationship between institution and students."

2) ಫಾತಿಮಾ ಹುಸೇನ್ ಸೈಯದ್ ವಿರುದ್ಧ ಭಾರತ್ ಎಜುಕೇಷನ್ ಸೊಸೈಟಿ ಮತ್ತು ಇತರರು, (AIR 2003 Bom 75) ಪ್ರಕರಣದಲ್ಲಿ ಇದೇ ರೀತಿಯಲ್ಲಿ ವಸ್ತ್ರ ಸಂಹಿತೆಗೆ ಸಂಬಂಧಿಸಿದಂತೆ ಕಾರ್ತಿಕ್ ಇಂಗ್ಲೀಷ್ ಸ್ಕೂಲ್, ಮುಂಬೈನಲ್ಲಿ ಸಮಸ್ಯೆ ಉದ್ಭವಿಸಿದ್ದು, ಸದರಿ ಸಮಸ್ಯೆಯ ವಿಚಾರಣೆಯನ್ನು ಬಾಂಬೆ ಉಚ್ಚ ನ್ಯಾಯಾಲಯ, ಪರಿಶೀಲಿಸಿದ್ದು, ಈ ಶಾಲೆಯ ಪ್ರಾಂಶುಪಾಲರು ಅರ್ಜಿದಾರರಿಗೆ ಶಿರವಸ್ತ್ರ(Head scarf) ಹಾಕಿಕೊಂಡು ಅಥವಾ ತಲೆಯನ್ನು ಮುಚ್ಚಿಕೊಂಡು ಶಾಲೆಗೆ ಬರದಂತೆ ನಿರ್ದೇಶಿಸಿರುವುದು ಸಂವಿಧಾನದ ಅನುಚ್ಛೇದ 25ರ ಉಲ್ಲಂಘನೆ ಅಲ್ಲವೆಂದು ಅಂತಿಮವಾಗಿ ತೀರ್ಪು ನೀಡಿರುತ್ತದೆ.

3) ಮೇಲೆ ಹೇಳಲಾದ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪನ್ನು ಅವಲೋಕಿಸಿ ಮಾನ್ಯ ಮದ್ರಾಸ್ ಉಚ್ಚ ನ್ಯಾಯಾಲಯವು ಸಹ ವಿ. ಕಮಲಮ್ಮ ವಿರುದ್ಧ ಡಾ.ಎಂ.ಜಿ.ಆರ್. ಮೆಡಿಕಲ್ ಯುನಿವರ್ಸಿಟಿ, ತಮಿಳುನಾಡು ಮತ್ತು ಇತರರು. ಈ ಪ್ರಕರಣದಲ್ಲಿ ಸದರಿ ವಿಶ್ವವಿದ್ಯಾಲಯವು ಮಾರ್ಪಾಡು ಮಾಡಿ ನಿಗಧಿಪಡಿಸಿದ ವಸ್ತ್ರ ಸಂಹಿತೆಯ ನಿರ್ಧಾರವನ್ನು ಎತ್ತಿ ಹಿಡಿದಿದೆ. ಇದೇ ತರಹದ ವಿಷಯವು ಮಾನ್ಯ ಮದ್ರಾಸ್ ಉಚ್ಚ ನ್ಯಾಯಾಲಯದಲ್ಲಿ ಶ್ರೀ ಎಂ.ವೆಂಕಟಸುಬ್ಬರಾವ್ ಮೆಟ್ರಿಕುಲೇಷನ್ ಹೈಯರ್ ಸೆಕೆಂಡರಿ ಸ್ಕೂಲ್ ಸ್ಟಾಫ್ ಅಸೋಸಿಯೇಷನ್ ವಿರುದ್ಧ ಶ್ರೀ ಎಂ.ವೆಂಕಟಸುಬ್ಬರಾವ್ ಮೆಟ್ರಿಕುಲೇಷನ್ ಹೈಯರ್ ಸೆಕೆಂಡರಿ ಸ್ಕೂಲ್ ಎಂಬ ಮತ್ತೊಂದು (2004) 2 MLJ 653 ಪ್ರಕರಣದಲ್ಲಿ ಸಹ ಪರಿಗಣಿತವಾಗಿದೆ.

ಮೇಲೆ ಪ್ರಸ್ತಾಪಿಸಲಾದ ಮಾನ್ಯ ಸರ್ವೋಚ್ಚ ನ್ಯಾಯಾಲಯ ಹಾಗೂ ವಿವಿಧ ರಾಜ್ಯಗಳ ಮಾನ್ಯ ಉಚ್ಚ ನ್ಯಾಯಾಲಯಗಳಲ್ಲಿನ ತೀರ್ಪುಗಳನ್ವಯ ಶಿರವಸ್ತ್ರ(Head scarf) ಹಾಕಿಕೊಂಡು ಅಥವಾ ತಲೆಯನ್ನು ಮುಚ್ಚಿಕೊಂಡು ಶಾಲೆಗೆ ಬರದಂತೆ ನಿರ್ದೇಶಿಸಿರುವುದು ಸಂವಿಧಾನದ ಅನುಚ್ಛೇದ 25ರ ಉಲ್ಲಂಘನೆ ಅಲ್ಲವೆಂದಿರುವುದರಿಂದ ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ 1983 ಮತ್ತು ಅದರಡಿ ರಚಿತವಾದ ನಿಯಮಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಇಪಿ 14 ಎಸ್‌ಹೆಚ್‌ಹೆಚ್ 2022 ಬೆಂಗಳೂರು, ದಿನಾಂಕ:05.02.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಶಿಕ್ಷಣ ಕಾಯ್ದೆ 1983 ಕಲಂ 133 ಉಪ ಕಂಡಿಕೆ (2)ರಲ್ಲಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಸರ್ಕಾರ ನಿಗದಿ ಪಡಿಸಿರುವ ಸಮವಸ್ತ್ರವನ್ನು ಕಡ್ಡಾಯವಾಗಿ ಧರಿಸತಕ್ಕದ್ದು. ಖಾಸಗಿ ಶಾಲೆಗಳು ತಮ್ಮ ಆಡಳಿತ ಮಂಡಳಿಗಳು ನಿರ್ಧರಿಸಿರುವಂತಹ ಸಮವಸ್ತ್ರವನ್ನೇ ಧರಿಸತಕ್ಕದ್ದು.

ಪದವಿ ಪೂರ್ವ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಕಾಲೇಜುಗಳಲ್ಲಿ ಆಯಾ ಕಾಲೇಜಿನ ಕಾಲೇಜು ಅಭಿವೃದ್ಧಿ ಸಮಿತಿ (CDC) ಅಥವಾ ಆಡಳಿತ ಮಂಡಳಿಯ ಮೇಲ್ವಿಚಾರಣಾ ಸಮಿತಿಯು ನಿರ್ಧರಿಸುವಂತಹ ಸಮವಸ್ತ್ರಗಳನ್ನು ಧರಿಸತಕ್ಕದ್ದು. ಆಡಳಿತ ಮಂಡಳಿಗಳು ಸಮವಸ್ತ್ರಗಳನ್ನು ನಿಗಧಿಪಡಿಸದೇ ಇದ್ದಲ್ಲಿ, ಸಮಾನತೆ ಮತ್ತು ಐಕ್ಯತೆಯನ್ನು ಕಾಪಾಡಿಕೊಂಡು ಹಾಗೂ ಸಾರ್ವಜನಿಕ ಸುವ್ಯವಸ್ಥೆಗೆ ಭಂಗ ಬರದಂತೆ ಇರುವ ಉಡುಪುಗಳನ್ನು ಧರಿಸಿಕೊಳ್ಳತಕ್ಕದ್ದೆಂದು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Padmini S.N 5/2/22
(ಪದ್ಮಿನಿ ಎಸ್.ಎನ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ(ಪದವಿ ಪೂರ್ವ)

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
6. ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
9. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ದಂಡಾಧಿಕಾರಿಗಳು.
10. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
11. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ/ಧಾರವಾಡ.
12. ರಾಜ್ಯದ ಎಲ್ಲಾ ಜಂಟಿ/ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ.
13. ಎಲ್ಲಾ ಜಂಟಿ / ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ.
14. ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಆಪ್ತ ಕಾರ್ಯದರ್ಶಿ. ವಿಧಾನಸೌಧ.
15. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ,
16. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ.
17. ಸರ್ಕಾರದ ಅಪರ/ಉಪ ಕಾರ್ಯದರ್ಶಿಗಳು-1, 2 ಆಪ್ತ ಸಹಾಯಕರು.
18. ಹೆಚ್ಚುವರಿ ಪ್ರತಿಗಳು.